# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ:18-10-2021 ರಂದು ಸಮಯ 12.00 ಗಂಟೆಗೆ ವಾರ್ಡ್ ಸಂಖ್ಯೆ: 155 ಹನುಮಂತನಗರಕ್ಕೆ ಸಂಬಂಧಪಟ್ಟಂತೆ ಹರಿಹರಗುಡ್ಡ ಉದ್ಯಾನವನ (ತಿಮ್ಮೇಶಪ್ರಭು ಉದ್ಯಾನವನ)ದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು**

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು ಹಾಗೂ ಅಧಿಕಾರಿಗಳು.**

1. ಶ್ರೀಮತಿ ಉಮಾದೇವಿ ಬಳಿಗಾರ್, ನೋಡಲ್ ಅಧಿಕಾರಿಗಳು – ಅಧ್ಯಕ್ಷರು
2. ಶ್ರೀ ಆನಂದ್.ಜಿ, ಸಹಾಯಕ ಅಭಿಯಂತರರು ವಾ.ನಂ.-155 – ಸದಸ್ಯ ಕಾರ್ಯದರ್ಶಿ
3. ಶ್ರೀ. ನಟರಾಜ್ (ಹಿ.ಆ.ಪ.) (ಹಿ.ಆ.ಪ.) – ಸದಸ್ಯರು
4. ಶ್ರೀ.ರಾಮಚಂದ್ರ (ಕಿ.ಅ-155) ಬೆಸ್ಕಾಂ
5. ಶ್ರೀಮತಿ.ಜ್ಯೋತಿ (ಟಿ.ಇ.)- ಸದಸ್ಯರು
6. ಕೃಷ್ಣಮೂರ್ತಿ-ಜಲ ಪರಿವೀಕ್ಷಕರು ಬಿಡಬ್ಲ್ಯೂಎಸ್‌ಎಸ್‌ಬಿ
7. ಶ್ರೀ ಪಿಳ್ಳಪ್ಪ – ಸಾರ್ವಜನಿಕರು.
8. ಶ್ರೀ ಉದಯ- ಸಾರ್ವಜನಿಕರು.
9. ಶ್ರೀ ಎಂ.ಚಂದ್ರಶೇಖರ್ – ಸಾರ್ವಜನಿಕರು.

****

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ನಂ 155ರ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರು ತಿಳಿಸಿರುವ ಮೇರೆಗೆ ನೆರೆದಿದ್ದ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರನ್ನು / ಅಧಿಕಾರಿಗಳನ್ನು ಮತ್ತು ಸ್ಥಳೀಯ ಸಾರ್ವಜನಿಕರಿಗೆ ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

**ಕಾಮಗಾರಿ ಇಲಾಖೆಗೆ ಸಂಬಂಧಪಟ್ಟ ವಿಷಯಗಳು.**

1) ಜಿಂಕೆ ಉದ್ಯಾನವನದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿರುವುದಿಲ್ಲ ಎಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಸದರಿ ವಿಷಯದ ಕುರಿತು ಜಿಂಕೆ ಉದ್ಯಾನವಕ್ಕೆ ಈಗಾಗಲೇ ಅನುದಾನ ದೊರೆತಿದ್ದು, ಸದರಿ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ ಎಂದು ಸಹಾಯಕ ಅಭಿಯಂತರರು ಹನುಮಂತನಗರ ರವರು ತಿಳಿಸಿದರು.

2) ಚಂದ್ರಗುಪ್ತ ಮೌರ್ಯ ರಸ್ತೆಯು ತುಂಬಾ ಹಾಳಾಗಿದ್ದು ರಸ್ತೆಯ ಡಾಂಬರೀಕರಣ ಮಾಡಿಕೊಡುವಂತೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಸದರಿ ವಿಷಯದ ಕುರಿತು ಸ್ಥಳ ಪರಿವೀಕ್ಷಣೆ/ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸಹಾಯಕ ಅಭಿಯಂತರರು ಹನುಮಂತನಗರ ರವರು ತಿಳಿಸಿದರು.

ಮು.ತಿ.ನೋ

Scanned by Scanner Go

**ಆರೋಗ್ಯ ಇಲಾಖೆ/ಘನತ್ಯಾಜ್ಯ ಇಲಾಖೆ**

1) ಹನುಮಂತನಗರದ ಜೈನ್ ಅಪಾರ್ಟ್‌ಮೆಂಟ್ ಎದುರು ಬೀದಿ ಬದಿಯ ಪಾದಚಾರಿ ಮಾರ್ಗದಲ್ಲಿ ಬೀದಿ ಬದಿಯ ಅಂಗಡಿಗಳನ್ನು ತೆರವು ಮಾಡಿ ಪಾದಚಾರಿ ಮಾರ್ಗದಲ್ಲಿ ಸಾರ್ವಜನಿಕರು ಓಡಾಡಲು ಅನುಕೂಲ ಮಾಡಿಕೊಡಲು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಸದರಿ ಸ್ಥಳವನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ಹನುಮಂತನಗರ ರವರು ತಿಳಿಸಿದರು.

**ಬಸವನಗುಡಿ ಸಂಚಾರಿ ಪೋಲೀಸ್ ಇಲಾಖೆ:**

1) ಶ್ರೀ.ಗವಿಗಂಗಾಧರೇಶ್ವರ ದೇವಸ್ಥಾನದ ರಸ್ತೆಯಲ್ಲಿ ಹಾಗು ಇತರೆಡೆಗಳಲ್ಲಿ ಸುಮಾರು ದಿನಗಳಿಂದ ನಿಂತಿರುವ ಹಳೆಯ ಗಾಡಿಗಳು ನಿಂತಿರುವುದರಿಂದ ರಸ್ತೆಯ ಶುಚಿತ್ವ ಹಾಳಾಗಿರುತ್ತದೆ. ಆದ್ದರಿಂದ ಹಳೆಯ ಗಾಡಿಗಳನ್ನು ತೆರವುಗೊಳಿಸುವಂತೆ ಹಾಗೂ ಸದರಿ ಜಾಗದಲ್ಲಿ ನೋ ಪಾರ್ಕಿಂಗ್ ಬೋರ್ಡ್‌ಗಳನ್ನು ಅಳವಡಿಸುವಂತೆ ಸಭೆಯಲ್ಲಿ ಹಾಜರಿದ್ದ ನೋಡಲ್ ಅಧಿಕಾರಿಗಳು ಕ್ರಮಕೈಗೊಳ್ಳಲು ಸೂಚಿಸಿದರು.

ಸದರಿ ಸ್ಥಳವನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಬಸವನಗಡಿ ಸಂಚಾರಿ ಪೋಲೀಸ್ ಠಾಣೆಯ ಎ.ಎಸ್.ಐ ರವರು ತಿಳಿಸಿದರು.

**ಅರಣ್ಯ ವಿಭಾಗ:**

1) ಹನುಮಂತನಗರದ 8ನೇ ಮುಖ್ಯರಸ್ತೆಯಲ್ಲಿ ಮರದ ಕೊಂಬೆಯನ್ನು ತೆರವು ಮಾಡಿಕೊಡುವಂತೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಸದರಿ ವಿಷಯದ ಕುರಿತು ಸ್ಥಳ ಪರಿವೀಕ್ಷಣೆ/ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲು ಉಪ ಅರಣ್ಯ ಸಂರಕ್ಷಣಾಧಿಕಾರಿ(ದ) ರವರಿಗೆ ಬಿ.ಬಿ.ಎಂ.ಪಿ. ರವರಿಗೆ ಕೋರಲಾಗಿರುತ್ತದೆ.

ವಾರ್ಡ್ ಕಮಿಟಿ ಸಭೆಯಲ್ಲಿ ಉಪಸ್ಥಿತರಿರುವ ಅಧಿಕಾರಿ ವರ್ಗದವರಿಗೆ, ವಾರ್ಡ್ ಕಮಿಟಿ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ಪ್ರತಿ ತಿಂಗಳ ಮೊದಲನೆಯ ಮತ್ತು ಮೂರನೇ ಶನಿವಾರದಂದು ವಾರ್ಡ್ ಕಮಿಟಿ ಸಭೆಯನ್ನು ಏರ್ಪಡಿಸಲಾಗುವುದು ಎಂದು ತಿಳಿಸುತ್ತಾ, ವಂದನಾರ್ಪಣೆ ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

18/10/24

ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ-155 ಹನುಮಂತನಗರ

ಅಧ್ಯಕ್ಷರು ವಾರ್ಡ್ ಸಮಿತಿ
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ-155 ಹನುಮಂತನಗರ

Scanned by Scanner Go